ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 268(661)

ಶ್ರೀ ಜೆ.ಟಿ.ಪಾಟೀಲ್(ಬೀಳಗಿ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಜಿಲ್ಲಾ ಪರಿಷತ್ ಅಸ್ತಿತ್ವಕ್ಕೆ ಬಂದ ನಂತರ ಬಿಜಾಪುರ ಜಿಲ್ಲೆಯಲ್ಲಿ ಮಾನ್ಯತೆ ಪಡೆದ ಮಾಧ್ಯಮಿಕ ಶಾಲೆಗಳೆಷ್ಟು?

ಆ) ಅಂತಹ ಶಾಲೆಗಳಿಗೆ ಸರ್ಕಾರ ಮಾನ್ಯತೆ ನೀಡಿ ಅನುದಾನ ಬಿಡುಗಡೆ ಮಾಡಿದೆಯೇ?

ಇ) ಅಂತಹ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರ ಅನುದಾನ ನೀಡಿದೆಯೇ ಹಾಗೂ ಅವರಿಗೆ ವೇತನ ಬಿಡುಗಡೆ ಮಾಡಿದೆಯೇ? ಇಲ್ಲವಾದಲ್ಲಿ ಜಿಲ್ಲಾ ಪರಿಷತ್ ಮಾನ್ಯತೆ ಪಡೆದಿರುವ ಈ ಶಾಲೆಗಳಿಗೆ ಹಾಗೂ ಸಿಬ್ಬಂದಿ ಸಲುವಾಗಿ ಸರ್ಕಾರದ ಮುಂದಿನ ಕ್ರಮವೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಜಿಲ್ಲಾ ಪರಿಷತ್ 27 ಶಾಲೆಗಳಿಗೆ ಮಂಜೂರಾತಿ ನೀಡಿದೆ. ಅದರಲ್ಲಿ ಮಾನ್ಯತೆ ಪಡೆದ ಶಾಲೆಗಳ ಸಂಖ್ಯೆ 4 ಮಾತ್ರ.

ಆ) -- ಇಲ್ಲ --

ಇ) ಶಾಶ್ವತ ಅನುದಾನ ರಹಿತವಾಗಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡಿರುವುದರಿಂದ ಸಿಬ್ಬಂದಿಗಳಿಗೆ ಅನುದಾನ ಹಾಗೂ ವೇತನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಬೆಂಗಳೂರಿನ ಚಿತ್ರಕಲಾ ಪರಿಷತ್ತಿಗೆ ನೆರವು.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 269(69)

ಶ್ರೀ ಆರ್.ಕೃಷ್ಣಪ್ಪ (ಜಯಮಹಲ್):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರಿನಲ್ಲಿರುವ ಚಿತ್ರಕಲಾ ಪರಿಷತ್ತಿಗೆ ಸರ್ಕಾರವು ಪ್ರತಿ ವರ್ಷ ನೀಡುತ್ತಿರುವ ನೆರವಿನ ಪ್ರಮಾಣವೆಷ್ಟು?

ಆ) 1995-96ರಲ್ಲಿ ಹೆಚ್ಚಿನ ನೆರವನ್ನು ನೀಡಬೇಕೆಂದು ಕೋರಲಾಗಿದೆಯೇ?

ಇ) ಈ ಚಿತ್ರಕಲಾ ಪರಿಷತ್ತಿನಲ್ಲಿ ಸರ್ಕಾರವು ನೀಡುತ್ತಿರುವ ಅನುದಾನವನ್ನು ಸರಿಯಾಗಿ ಉಪಯೋಗಿಸಿಕೊಳ್ಳಲಾಗುತ್ತಿದೆಯೇ?

ಈ) ಈ ಚಿತ್ರಕಲಾ ಪರಿಷತ್ತಿನ ಮೇಲೆ ಸರ್ಕಾರಕ್ಕೆ ಇರತಕ್ಕ ಅಧಿಕಾರಗಳೇನು?

ಶ್ರೀ ಡಿ.ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು):-

ಅ) ರೂ. 12,50,000/

ಆ) -- ಇಲ್ಲ --

ಇ) -- ಹೌದು --

ಈ) ಇತರೆ ಅನುದಾನಿತ ಸಂಸ್ಥೆಗಳ ಮೇಲಿರುವಂತೆ.

ವಿಷಯ:- 1996ರ ರಾಷ್ಟ್ರೀಯ ಕ್ರೀಡೆಗಾಗಿ ಕೋರಮಂಗಲದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 270(62)

ಶ್ರೀ ಆರ್.ಕೃಷ್ಣಪ್ಪ (ಜಯಮಹಲ್) :- ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ